# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 22.12.2025 ರಂದು ಪೂರ್ವಾಹ್ನ ಗಂಟೆ 10.30 ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆದ 2025-26ನೇ ಸಾಲಿನ ಶೈಕ್ಷಣಿಕ ಮಂಡಳಿ ಸಮಿತಿಯ ಪ್ರಥಮ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು:**

**ಅನುಪಸ್ಥಿತರು:**

ಪ್ರಾರಂಭದಲ್ಲಿ ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

| | |
|---|---|
| **ಕಾರ್ಯಸೂಚಿ ಸಂಖ್ಯೆ** | ಎಸಿಸಿ: ಶೈ.ಮ.ಸ.ಸ.1:1 (2025-26) |
| **ವಿಷಯ:** | ಶೈಕ್ಷಣಿಕ ವರ್ಷ 2025-26 ನೇ ಸಾಲಿನಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ವಿವಿಧ ಸ್ನಾತಕ/ಸ್ನಾತಕೋತ್ತರ/ಪಿ.ಹೆಚ್.ಡಿ. ಕಾರ್ಯಕ್ರಮಗಳಿಗೆ ವಿದೇಶಿ ವಿದ್ಯಾರ್ಥಿಗಳ ಪ್ರವೇಶಾತಿ ಬಗ್ಗೆ. |
| **ನಿರ್ಣಯ** | ಶೈಕ್ಷಣಿಕ ವರ್ಷ 2025-26ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನಡೆಸಲಾಗುವ ವಿವಿಧ ಸ್ನಾತಕ/ಸ್ನಾತಕೋತ್ತರ/ಪಿಹೆಚ್.ಡಿ. ಕಾರ್ಯಕ್ರಮಗಳಿಗೆ ಪ್ರವೇಶಾತಿ ಪಡೆದ ವಿದೇಶಿ ವಿದ್ಯಾರ್ಥಿಗಳ ಪಟ್ಟಿಯನ್ನು ಪರಿಗಣಿಸಿ ಶೈಕ್ಷಣಿಕ ಮಂಡಳಿಗೆ ಶಿಫಾರಸ್ಸು ಮಾಡಲಾಯಿತು. ಮುಂದುವರೆದು ಈ ಕೆಳಗಿನ ವಿಷಯಗಳ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಶೈಕ್ಷಣಿಕ ಮಂಡಳಿ ಸಭೆಗೆ ಶಿಫಾರಸ್ಸು ಮಾಡಲಾಯಿತು. |

1. ವಿದೇಶಿ ವಿದ್ಯಾರ್ಥಿಗಳಿಗೆ ಪ್ರಾರಂಭದಲ್ಲಿ Orientation Programme ನಡೆಸಿ ವಿಶ್ವವಿದ್ಯಾನಿಲಯದ Statute & Regulaltions ಬಗ್ಗೆ ಹಾಗೂ ವಿಶ್ವವಿದ್ಯಾನಿಲಯದಲ್ಲಿ ಅನುಸರಿಸಬೇಕಾದ ನಿಯಮಾವಳಿಗಳ ಬಗ್ಗೆ ಅಗತ್ಯ ಮಾಹಿತಿಯನ್ನು ನೀಡುವುದು.

2. ಪೂರ್ಣಕಾಲಿಕವಾಗಿ ಸಂಶೋಧನೆಯಲ್ಲಿ ತೊಡಗಿರುವ ವಿದೇಶಿ ವಿದ್ಯಾರ್ಥಿಗಳ ವಿಭಾಗದಲ್ಲಿನ ಅನಧಿಕೃತ ಗೈರುಹಾಜರಿಯನ್ನು ವಿಭಾಗದ ಅಧ್ಯಕ್ಷರು ಅಂತರರಾಷ್ಟ್ರೀಯ ವಿದ್ಯಾರ್ಥಿ ಕೇಂದ್ರದ ನಿರ್ದೇಶಕರ ಗಮನಕ್ಕೆ ತರುವುದು.

3. ಕುಲಸಚಿವರ (ಪರೀಕ್ಷಾಂಗ) ಇವರು ಸಂಶೋಧನಾ ವಿದ್ಯಾರ್ಥಿಗಳು ನಿರಂತರ ಮೂರು ಸಂಶೋಧನಾ ಪ್ರಗತಿ ವರದಿಯನ್ನು ಸಲ್ಲಿಸದ ವಿದೇಶಿ ವಿದ್ಯಾರ್ಥಿಗಳ ಪಿಹೆಚ್.ಡಿ. ನೋಂದಣಿಯನ್ನು ರದ್ದುಪಡಿಸುವ ಬಗ್ಗೆ ಅಗತ್ಯಕ್ರಮವನ್ನು ಕೈಗೊಳ್ಳುವುದು.

4. ವಿದೇಶಿ ಪಿಹೆಚ್.ಡಿ. ವಿದ್ಯಾರ್ಥಿಗಳು Viva-voce ಪರೀಕ್ಷೆಗೆ ವಿಶ್ವವಿದ್ಯಾನಿಲಯದಲ್ಲಿ ಸ್ವಯಂ ಹಾಜರಿರುವುದನ್ನು ಕಡ್ಡಾಯಗೊಳಿಸುವುದು.

ಕೊನೆಯದಾಗಿ ಮಾನ್ಯ ಕುಲಸಚಿವರು ಎಲ್ಲಾ ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/- | ಸಹಿ/- |
| **ಕುಲಸಚಿವರು** | **ಕುಲಪತಿಯವರು** |